Govt. of Karnataka [C.R.P. 67

Deposition Sheets (R.P. No.

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಶಿರಾ**

**ಪ್ರಕರಣ ಸಂಖ್ಯೆ: 1362/2025**

**ದಿನಾಂಕ: 22-04-2026** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು.

| | | | |
|---|---|---|---|
| ಸಿಡಬ್ಲ್ಯು: | 4 | ಪಿಡಬ್ಲ್ಯು | 3 |
| ಹೆಸರು | ವರುಣ್ ಕುಮಾರ್ | | |
| ತಂದೆ / ಗಂಡನ ಹೆಸರು | ಕುಮಾರ್ | | |
| ವಯಸ್ಸು | 23 | | |
| ಉದ್ಯೋಗ | ತರಕಾರಿ ವ್ಯಾಪಾರ | | |
| ವಾಸ | ಶಿರಾ ಟೌನ್ | | |

**ಮುಖ್ಯ ವಿಚಾರಣೆ: ಎ ಪಿ ಪಿ ರವರಿಂದ:**

ಆರೋಪಿಯನ್ನು ವಿಡಿಯೋ ಕಾನ್ ಫರೆನ್ಸ್ ಮೂಲಕ ಹಾಜರುಪಡಿಸಲಾಗಿದ್ದು , ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ. ನಿಪಿ-2 ರಲ್ಲಿರುವ ಸಹಿ ನನ್ನದು. ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು **ನಿಪಿ-2(ಬಿ)** ಎಂದು ಗುರುತಿಸಲಾಯಿತು.

ದಿ: 10-10-2025 ರಂದು ರಾತ್ರಿ 10.15 ಕ್ಕೆ ನಾನು ನನ್ನ ಅಶೋಕ್ ಲೈ ಲ್ಯಾಂಡ್ ವಾಹನಕ್ಕೆ ಡೀಸಲ್ ಹಾಕಿಸಲು ಬುಕ್ಕಾಪಟ್ಟಣ ರಸ್ತೆಯಲ್ಲಿರುವ ಜಿಯೋ ಪೆಟ್ರೋಲ್ ಬಂಕ್ ಗೆ ಹೋದಾಗ ಶಿರಾ ನಗರ ಪೋಲಿಸರು ನನ್ನ ವಾಹನದ ಎಮಿಶನ್ ಟೆಸ್ಟ್ ಮಾಡುತ್ತಿದ್ದು , ಆ ಸಮಯದಲ್ಲಿ ಆರೋಪಿಯಾದ ಶಶಿಕುಮಾರ್ ರವರು ಶಿರಾದ ಸರ್ಕಾರಿ ಆಸ್ಪತ್ರೆಯ ಬಳಿ ಒಂದು ಬೈಕ್ ಕಳ್ಳತನ ಮಾಡಿರುವ ಹಿನ್ನೆಲೆಯಲ್ಲಿ ನನ್ನನ್ನು ಹಾಗೂ ಚಾಸಾ 5 ರವರನ್ನು ಸ್ಥಳ ಮಹಜರ್ ಮಾಡಲು ಕರೆದಿರುತ್ತಾರೆ. ಪೋಲಿಸರು ಸ್ಥಳದಲ್ಲಿ ಸ್ಥಳ ಮಹಜರ್ ಮಾಡಿ ನನ್ನ ಸಹಿ ಪಡೆದು , ಬಾವಚಿತ್ರ ತೆಗೆದಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು **ಭಾಗಶಃ ಪ್ರತಿಕೂಲ** ಸಾಕ್ಷಿಯೆಂದು ಪರಿಗಣಿಸಿ ಎಪಿಪಿ ರವರು ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಎ ಪಿ ಪಿ ರವರಿಂದಃ**

ಮಹಜರ್ ಕಾಲದಲ್ಲಿ ಪೋಲಿಸರು ನನ್ನ ಹಾಗೂ ಚಾಸಾ 5 ರವರ ಸಮಕ್ಷಮ ಆರೋಪಿ ಕಳುವು ಮಾಡಿದ ದ್ವಿಚಕ್ರ ವಾಹನ ನಂ. ಕೆಎ-06-ಇಬಿ-4556 ಹಿರೋ ಹೊಂಡಾ ಸ್ಪೆಂಡರ್ ಪ್ಲಸ್ ವಾಹನವನ್ನು ನಿಪಿ-2 ರಂತೆ ಮಹಜರ್ ಮಾಡಿ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿ. ನಿಪಿ-2 ನ್ನು ರಾತ್ರಿ 10.20 ರಿಂದ 11.00 ಗಂಟೆಯವರೆಗೆ ಮಾಡಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದಃ**

ಪೋಲಿಸರು ಮಹಜರ್ ಗೆ ಸಹಕರಿಸಲು ನನ್ನನ್ನು ನೋಟಿಸ್ ಕೊಟ್ಟಿರುತ್ತಾರೆ. ಮುಂದುವರೆದು ಸಾಕ್ಷಿಯು ಮೌಖಿಕವಾಗಿ ಹೇಳಿದ್ದು ,ಬರವಣಿಗೆಯಲ್ಲಿ ನೋಟಿಸ್ ಕೊಟ್ಟಿರುವುದಿಲ್ಲ ಎಂದು ನುಡಿಯುತ್ತಾರೆ. ಜಿಯೋ ಪೆಟ್ರೋಲ್ ಬಂಕ್ ಬಳಿ ಕತ್ತಲು ಇರುತ್ತದೆ ಎಂದರೆ ಸರಿ. ಆ ದಿನ ಯಾವ ವಾಹನ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದು ನನಗೆ ಸರಿಯಾಗಿ ಕಾಣಿಸಿರುವುದಿಲ್ಲ ಎಂದರೆ ಸರಿಯಲ್ಲ. ಆ ಬಗ್ಗೆ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪಂಚನಾಮೆ ಆಗುವ ಕಾಲಕ್ಕೆ ನಾನು , ಚಾಸಾ 5 , ಆರೋಪಿ ಮತ್ತು ಪೋಲಿಸರು ಇದ್ದೆವು. ಆ ಸಮಯದಲ್ಲಿ ಸಾರ್ವಜನಿಕರು ಇರಲಿಲ್ಲ. ಮಹಜರ್ ನ್ನು ಕೈ ಬರವಣಿಯಲ್ಲಿ ಬರೆದಿರುತ್ತಾರೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ಮುಂದುವರೆದು ಸಾಕ್ಷಿಯು ನಾನು ಓದಿ ನೋಡಿ ಸಹಿ ಮಾಡಿರುತ್ತೇನೆ ಎಂದು ತಿಳಿಸಿರುತ್ತಾರೆ. ಪೋಲಿಸರ ಕೋರಿಕೆಯ ಮೇರೆಗೆ ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ವಾಹನವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-2 ನ್ನು ಪೋಲಿಸರು ಠಾಣೆಯಲ್ಲಿ ಸೃಷ್ಟಿಸಿಕೊಂಡ ದಾಖಲೆಗೆ ನಾನು ಸಹಿ ಮಾತ್ರ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಆರೋಪಿಯನ್ನು ಈ ಹಿಂದೆ ನೋಡಿರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಮ್.ಎಫ್.ಸಿ. ಶಿರಾ.